## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಗದಗ, ಶಿವಮೊಗ್ಗ ಮತ್ತು ಯಾದಗಿರ್ ಜಿಲ್ಲೆಯಲ್ಲಿ 3 ಗ್ರಾಮಗಳ ಆಯ್ಕೆ ಮಾಡಿ ಅನುಮೋದಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2014 ದಿ:20.10.2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:63:ಗ್ರಾವಿಯೋ:2015, ದಿನಾಂಕ: 09.11.2015 (3) ಮತ್ತು 28.08.2015.

***

**ಪ್ರಸ್ತಾವನೆ:**

ಗ್ರಾಮ ವಿಕಾಸ ಯೋಜನೆಯಡಿ ರಾಜ್ಯದ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಸದರಿ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರದ ಆದೇಶವನ್ನು ಹೊರಡಿಸಿ ಅದರಂತೆ ಮಾರ್ಗಸೂಚಿಯನ್ನು ಹೊರತರಲಾಗಿದೆ. ಅದರಂತೆ ಓದಲಾದ (2) ರಲ್ಲಿ ಗದಗ, ಶಿವಮೊಗ್ಗ ಮತ್ತು ಯಾದಗಿರ್ ವಿಧಾನಸಭಾ ಕ್ಷೇತ್ರಗಳಲ್ಲಿ ಗ್ರಾಮಗಳನ್ನು ಆಯ್ಕೆ ಮಾಡಿ ಆದೇಶ ಹೊರಡಿಸಲಾಗಿದೆ.

ಮುಂದುವರೆದು ಗದಗ ಜಿಲ್ಲೆ ಗದಗ ವಿಧಾನಸಭಾ ಕ್ಷೇತ್ರದ ಮಲ್ಲಸಮುದ್ರ ಗ್ರಾಮ, ಶಿವಮೊಗ್ಗ ಜಿಲ್ಲೆ ಸೊರಬ ವಿಧಾನಸಭಾ ಕ್ಷೇತ್ರದ ಮಲ್ಲಾಪುರ ಗ್ರಾಮ ಮತ್ತು ಯಾದಗಿರ್ ಜಿಲ್ಲೆ ಶಹಾಪೂರ ವಿಧಾನಸಭಾ ಕ್ಷೇತ್ರದ ದರ್ಶನಾಪೂರ ಗ್ರಾಮಗಳನ್ನು ವಿಶೇಷ ಪ್ರಕರಣದಡಿ ಗ್ರಾಮ ವಿಕಾಸ ಯೋಜನೆಗೆ ಅನುಮೋದಿಸುವ ಕುರಿತು ಸರ್ಕಾರ ಪರಿಶೀಲಿಸಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

### <u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ : 57 : ಗ್ರಾವಿಯೋ : 2015. ಬೆಂಗಳೂರು, ದಿನಾಂಕ 15.09.2016</u>

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಗದಗ ಜಿಲ್ಲೆ ಗದಗ ವಿಧಾನಸಭಾ ಕ್ಷೇತ್ರದ ಮಲ್ಲಸಮುದ್ರ ಗ್ರಾಮ, ಶಿವಮೊಗ್ಗ ಜಿಲ್ಲೆ ಸೊರಬ ವಿಧಾನಸಭಾ ಕ್ಷೇತ್ರದ ಮಲ್ಲಾಪುರ ಗ್ರಾಮ ಮತ್ತು ಯಾದಗಿರ್ ಜಿಲ್ಲೆ ಶಹಾಪೂರ ವಿಧಾನಸಭಾ ಕ್ಷೇತ್ರದ ದರ್ಶನಾಪೂರ ಗ್ರಾಮಗಳನ್ನು ವಿಶೇಷ ಪ್ರಕರಣದಡಿ ಗ್ರಾಮ ವಿಕಾಸ ಯೋಜನೆಗೆ ಅನುಬಂಧದಲ್ಲಿರುವಂತೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಅನುಬಂಧದಲ್ಲಿ ವಿವರಿಸಿರುವಂತೆ ಗ್ರಾಮಗಳಿಗೆ ನಿಗದಿಪಡಿಸಿರುವ ಅನುದಾನದ ಮಿತಿಯಂತೆ ಕ್ರಮ ವಹಿಸುವುದು.
2. ಗ್ರಾಮ ಪಂಚಾಯತಿಗಳು ವಾರ್ಡ್‌ಸಭೆ / ಗ್ರಾಮಸಭೆಗಳನ್ನು ನಡೆಸಿ ಗ್ರಾಮಾಭಿವೃದ್ಧಿ ಯೋಜನೆಯನ್ನು ಮಾರ್ಗಸೂಚಿಯಲ್ಲಿರುವಂತೆ ತಯಾರಿಸಿ ಗ್ರಾಮ ಪಂಚಾಯತಿಯ ಅನುಮೋದನೆಯನ್ನು ಪಡೆಯುವುದು. ಅನುಮೋದನೆಯಾದ ಗ್ರಾಮಾಭಿವೃದ್ಧಿ ಯೋಜನೆಯನ್ನು ತಾಲ್ಲೂಕು, ಜಿಲ್ಲಾ ಪಂಚಾಯತಿ ಹಾಗೂ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.
3. ಗ್ರಾಮ ಪಂಚಾಯತಿಗಳು ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದ ಕಾಲೋನಿಗಳ ಅಭಿವೃದ್ಧಿಗೆ ಕೈಗೊಳ್ಳುವ ಕ್ರಿಯಾ / ಗ್ರಾಮಾಭಿವೃದ್ಧಿ ಯೋಜನೆಯನ್ನು ಪ್ರತ್ಯೇಕವಾಗಿ ಕಡ್ಡಾಯವಾಗಿ ತಯಾರಿಸುವುದು.
4. ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಒಟ್ಟು ಅನುದಾನದ ಪೈಕಿ ಕನಿಷ್ಠ ಶೇ.18% ರಷ್ಟು ಅನುದಾನವನ್ನು ಪರಿಶಿಷ್ಟ ಜಾತಿ ವರ್ಗದವರಿಗೆ

ಮತ್ತು ಕನಿಷ್ಠ ಶೇ.7% ರಷ್ಟು ಅನುದಾನವನ್ನು ಪರಿಶಿಷ್ಟ ಪಂಗಡದವರಿಗೆ ಮೀಸಲಿಡುವುದು.

5. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ಮೀಸಲಾದ ಅನುದಾನವನ್ನು ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಅನುಮೋದಿತ ಯೋಜನೆಯಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಾಲೋನಿಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.

6. ಗ್ರಾಮ ಪಂಚಾಯತಿಗಳು ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸುವಾಗ ಮುಖ್ಯ ಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಮಾರ್ಗಸೂಚಿಯ ಪುಟ ಸಂಖ್ಯೆ 27 ರಲ್ಲಿನ 5.1.2 ರಲ್ಲಿ ಸೂಚಿಸಿರುವ ಪರಿಮಾಣಗಳಂತೆ ಅಳವಡಿಸುವುದು ಹಾಗೂ ಕಾರ್ಯಕ್ರಮವಾರು ಭರಿಸುವ ಅನುದಾನವನ್ನು ಸಹ ಪ್ರತ್ಯೇಕವಾಗಿ ನಮೂದಿಸುವುದು.

7. ಶಾಸಕರ ಅಧ್ಯಕ್ಷತೆಯಲ್ಲಿ ರಚನೆಯಾದ ಗ್ರಾಮ ವಿಕಾಸ ಯೋಜನೆಯ ಉಸ್ತುವಾರಿ ಸಭೆಯನ್ನು ಕಡ್ಡಾಯವಾಗಿ 2 ತಿಂಗಳಿಗೊಮ್ಮೆ ನಡೆಯುವಂತೆ ಕ್ರಮ ಕೈಗೊಳ್ಳುವುದು. ಪ್ರಗತಿಯನ್ನು ಪರಾಮರ್ಶಿಸಿ ಗ್ರಾಮದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಪಡೆದು ಮತ್ತು ವಿವಿಧ ಯೋಜನೆಗಳಲ್ಲಿ ಲಭ್ಯವಾಗುವ ಅನುದಾನವನ್ನು ಒಗ್ಗೂಡಿಸಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮವನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದು.

8. ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕ ವಹಿಗಳಲ್ಲಿ (Separate Register) ನಿರ್ವಹಿಸುವುದು ಹಾಗೂ ಆಯಾ ಕಾರ್ಯ ಕ್ರಮಗಳ ಅನುದಾನವನ್ನು ಬಳಸುವಾಗ ಸರ್ಕಾರ ಹೊರಡಿಸಿದ ಆದೇಶ/ ಮಾರ್ಗಸೂಚಿ/ ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬೂವನಹಳ್ಳಿನಾಗರಾಜ್)**
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಯನ್ನು ಮಾಹಿತಿಗಾಗಿ:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1& 2) ಕರ್ನಾಟಕ, ಬೆಂಗಳೂರು
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌದ, ಬೆಂಗಳೂರು.
4. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು.

8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಗದಗ, ಶಿವಮೊಗ್ಗ ಮತ್ತು ಯಾದಗಿರ್.
9. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ಗದಗ, ಶಿವಮೊಗ್ಗ ಮತ್ತು ಯಾದಗಿರ್.
14. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
16. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ, ಶಿವಮೊಗ್ಗ ಮತ್ತು ಯಾದಗಿರ್.
17. ಮುಖ್ಯಸ್ಥರು, ಗಣಕ ಕೋಶ, ಗ್ರಾ ಮತ್ತು ಪಂ.ರಾಜ್. ಇಲಾಖೆ ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
18. ಸಂಪಾದಕರು, ಕರ್ನಾಟಕ ವಿಕಾಸ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
19. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಅನುಬಂಧ

ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ:57:ಗ್ರಾವಿಯೋ:2015 ದಿನಾಂಕ: 15.09.2016
(ಗ್ರಾಮ ವಿಕಾಸ - ಗದಗ, ಶಿವಮೊಗ್ಗ ಮತ್ತು ಯಾದಗಿರ್ ಜಿಲ್ಲೆಯ ಗ್ರಾಮಗಳ ಆಯ್ಕೆ ಪಟ್ಟಿ)

(ರೂ.ಲಕ್ಷಗಳಲ್ಲಿ)

| ಜಿಲ್ಲೆ | ವಿಧಾನ ಸಭಾ ಕ್ಷೇತ್ರ | ಗ್ರಾಮಗಳ ಹೆಸರು | ಪ.ಜಾತಿ | ಪ.ಪಂಗಡ | ಒಟ್ಟು ಜನಸಂಖ್ಯೆ | ಗ್ರಾಮವಾರು ನಿಗಧಿ ಪಡಿಸಿದ ಅನುದಾನ |
|---|---|---|---|---|---|---|
| ಗದಗ | ಗದಗ | ಮಲ್ಲಸಮುದ್ರ | 988 | 152 | 3598 | 75 |
| ಶಿವಮೊಗ್ಗ | ಸೊರಬ | ಮಲ್ಲಾಪುರ | 173 | 43 | 1097 | 75 |
| ಯಾದಗಿರ್ | ಶಹಾಪೂರ | ದರ್ಶನಾಪೂರ | 310 | 51 | 1731 | 75 |

(ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ